ದಿನಾಂಕಃ **17-02-2024** ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ ವಾದಿ ಪರ ಶ್ರೀ ಡಿ ಎಸ್ ಯು ವಕೀಲರಿಂದಃ

ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ಸಲ್ಲಿಸಿರುವ ಅಂಶಗಳನ್ನು ನಾನು ನನ್ನ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿ ಹೇಳಿರುವ ಅಂಶಗಳೆಲ್ಲಾ ಸತ್ಯವಾಗಿರುತ್ತದೆ ಹಾಗೂ ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.

ದಾವೆಗೆ ಸಂಬಂಧಿಸಿದಂತೆ ಈ ಕೆಳಗಿನ ದಾಖಲಾತಿಗಳನ್ನು ಹಾಜರು ಮಾಡುತ್ತಿದ್ದು ಸದರಿ ದಾಖಲೆಗಳನ್ನು ನಿಶಾನೆಗಳಾಗಿ ಗುರುತಿಸಿಕೊಳ್ಳಲು ಕೋರುತ್ತೇನೆ.

1. ನಮ್ಮ ಕುಟುಂಬದ ವಂಶವೃಕ್ಷ ಪ್ರಮಾಣ ಪತ್ರವನ್ನು ನಿಪಿ-1 ಎಂದು ಗುರುತಿಸಲಾಯಿತು.
2. 2 ಮ್ಯುಟೇಷನ್ ರಿಜಿಸ್ಟರ್ ಪ್ರತಿಗಳನ್ನು ನಿಪಿ-2 ಮತ್ತು 3 ಎಂದು ಗುರುತಿಸಲಾಯಿತು.
4. ಸರ್ವೆ ನಂ. 99/6, 99/7, 9/3, 6/9, 6/7, 7/2 ಸಿ, 99/1, 157/1, 70/1 ಬಿ, 74, 100/2, 83/1 ಕ್ಕೆ ಸಂಬಂಧಪಟ್ಟಿರುವ ಆರ್ ಟಿ ಸಿ ಗಳನ್ನು ನಿಪಿ-4 ರಿಂದ ನಿಪಿ-15 ಎಂದು ಗುರುತಿಸಲಾಯಿತು.
16. 1 ಮತ್ತು 2 ನೇ ಪ್ರತಿವಾದಿಯವರು ನಮಗೆ ಪಾಲು ಕೊಡದೆ ದಾವಾ ಸ್ವತುಗಳನ್ನು ವಿಭಾಗ ಮಾಡಿಕೊಂಡಿರುತ್ತಾರೆ ಅದರ ಮೂಲ ದಾಖಲಾತಿಗಳು 1 ಮತ್ತು 2 ನೇ ಪ್ರತಿವಾದಿಗಳ ವಶದಲ್ಲಿದೆ ಆದ್ದರಿಂದ ದೃಢೀಕೃತ ವಿಭಾಗ ಪತ್ರದ ದಿಃ17-11-2020 ನ್ನು ನಿಪಿ-16 ಎಂದು ಗುರುತಿಸಲಾಯಿತು.

ಆದ್ದರಿಂದ ದಾವೆಯಲ್ಲಿ ಕೋರಿರುವಂತೆ ದಾವೆಯನ್ನು ನನ್ನ ಪರವಾಗಿ ಡಿಕ್ರಿ ಮಾಡಬೇಕೆಂದು ಕೋರಿಕೊಳ್ಳುತ್ತೇನೆ.

**1** ರಿಂದ **4** ನೇ ಪ್ರತಿವಾದಿಯವರು ಅವರ ಪ್ರತಿವಾದ ಪತ್ರ ಸಲ್ಲಿಸಿರುವುದಿಲ್ಲ ಆದ್ದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕರಿಸಿ ಓದಿ ಹೇಳಿ, ಕೇಳಿದಾಗ ಸರಿ ಇದೆ ಎಂದು ಒಪ್ಪಿರುತ್ತಾರೆ.)

ಪ್ರಧಾನ ಸಿವಿಲ್ ನ್ಯಾಯಾಧೀಶರು
ತಿಪಟೂರು.